ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂಃ ರವರ ನ್ಯಾಯಾಲಯ,
ಕೊಪ್ಪ

**ಸಿ. ಸಿ. ನಂ. 143/2025**

ಫಿರ್ಯಾಧಿದಾರರುಃ ರಾಜ್ಯದ ಪರವಾಗಿ: ಕೊಪ್ಪ ಪೋಲೀಸರು

**-ವಿರುದ್ಧ-**

ಆರೋಪಿ/ತರುಃ ಮಹಮ್ಮದ್ ತೌಶಿಫ್ ಬಿನ್ ಎಂ ಎಂ ಹಸನಬ್ಬ, 40 ವರ್ಷ, ಪೈಂಟಿಂಗ್ ಕೆಲಸ, ವಾಸ ಭಾರತ್ ರೈಸ್ ಮಿಲ್ ರಸ್ತೆ, ನೇತಾಜಿ ನಗರ, ಕೊಪ್ಪ ತಾಲ್ಲೂಕು.

**ದೋಷಾರೋಪಣೆ**

ಶ್ರೀಮತಿ ನಂದಿನಿ ಎಂ.ಎನ್., ಬಿ.ಎ., ಎಲ್.ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ಕೊಪ್ಪ, ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 14.01.2025 ರಂದು ರಾತ್ರಿ 8.45 ಗಂಟೆಯ ಸಮಯದಲ್ಲಿ ಕೊಪ್ಪ ತಾಲ್ಲೂಕು ಗುಣವಂತೆ ರಸ್ತೆಯಲ್ಲಿರುವ ಶ್ರೀ ವೀರಭದ್ರೇಶ್ವರ ವಾಟರ್ ಸರ್ವೀಸ್ ಸೆಂಟರ್ ನ ಮುಂಭಾಗದಲ್ಲಿ ಆರೋಪಿಯಾದ ನೀವು ಕೆಎ-18/ ಇ.ಎಫ್ 5395 ಸ್ಕೂಟ್ಟಿಯಲ್ಲಿ ದನದ ಮಾಂಸವನ್ನು ಯಾವುದೇ ಪರವಾನಿಗೆ ಇಲ್ಲದೇ ಮಾರಾಟ ಮಾಡುವ ಉದ್ದೇಶದಿಂದ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದೀರಿ. ಆ ಮೂಲಕ ಕರ್ನಾಟಕ ಗೋಹತ್ಯೆ ನಿಯಂತ್ರಣ ಮತ್ತು ಜಾನುವಾರು ಸಂರಕ್ಷಣೆ ವಿಧೇಯಕ-2020 ರ ಕಲಂ 12 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯದೊಳಗೆ ಎಸಗಿರುತ್ತೀರಿ ಎಂಬುದಾಗಿದೆ.

ಮೇಲಿನ ದೋಷಾರೋಪಣೆ ಬಗ್ಗೆ ಅಧಿವಿಚಾರಣೆ ಈ ನ್ಯಾಯಾಲಯದಿಂದ ನಡೆಸಲ್ಪಡುತ್ತದೆ ಎಂದು ಈ ಮೂಲಕ ನಿರ್ದೇಶಿಸಲಾಗಿದೆ.

ಸಹಿ/- 20.02.2026.
(ಶ್ರೀಮತಿ ನಂದಿನಿ ಎಂ.ಎನ್.)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರದನ್ಯಾದಂಃ, ಕೊಪ್ಪ.

**ದೋಷಾರೋಪಣೆ**

ಪ್ರ-1ಃ ಈ ಓದಿ ಹೇಳಿದ ದೋಷಾರೋಪಣೆ ನಿಮಗೆ ಅರ್ಥವಾಯಿತೇ?

ಉಃ ತಿಳಿಯಿತು.

ಪ್ರ-2ಃ ಮೇಲಿನ ದೋಷಾರೊಪನೆಯನ್ನು ಒಪ್ಪಿಕೊಳ್ಳುತ್ತಿರೋ ಅಥವಾ ನಿಮಗೆ ಏನಾದರೂ ಪ್ರತಿರಕ್ಷೆ ಇದೆಯೇ?

ಉಃ ವಿಚಾರಣೆಯಾಗಬೇಕು.

ಈ ಮೇಲ್ಕಂಡ ದೋಷಾರೋಪಣೆಯನ್ನು ನಾನೇ ಸ್ವತಃ ಆರೋಪಿತರಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಡೀಕರಿಸುತ್ತೇನೆ.

ದಿನಾಂಕ 20.02.2026.

ಸಹಿ/- 20.02.2026.
(ಶ್ರೀಮತಿ ನಂದಿನಿ ಎಂ.ಎನ್.)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧನ್ಯಾದಂಃ, ಕೊಪ್ಪ.